# ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ : M/s Avaada KNGreen Private Limited ಕಂಪನಿಗೆ ವಿಜಯಪುರ ಜಿಲ್ಲೆಯ, ಬಸವನಬಾಗೇವಾಡಿ ಮತ್ತು ಕೊಲ್ಹಾರ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 100 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ :** 1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ:KREDL/08/ AKNGPL-100 MW/Vijayapura/F-10/2023/0722, ದಿನಾಂಕ: 03.03.2023.

2) ದಿನಾಂಕ:04.03.2023 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡಾವಳಿ.

3) M/s Avaada KNGreen Private Limited ಕಂಪನಿಯ ಪತ್ರ ದಿನಾಂಕ:15.03.2023

4) ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15113/2022 (GM-RES)

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರ.ಸಂ.(1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Avaada KNGreen Private Limited ಕಂಪನಿಗೆ ವಿಜಯಪುರ ಜಿಲ್ಲೆಯ, ಬಸವನಬಾಗೇವಾಡಿ ಮತ್ತು ಕೊಲ್ಹಾರ ತಾಲ್ಲೂಕುಗಳ, ಮುಳವಾಡ, ಕಲಕುರಕೆ, ಮಲ್ಲಾಗನ್‌ಕೆರೆ, ಮಸುತಿ ತಲೆವಾಡ, ಮುತಾಗಿ, ಟಕ್ಕಲಕ್ಕಿ, ನಾಗವಾಡ, ಮನುರ ಮತ್ತು ಉಪ್ಪಲದಿನ್ನಿ ಗ್ರಾಮಗಳಲ್ಲಿ 100 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕೆ.ಆರ್.ಇ.ಡಿ.ಎಲ್. ನಿಯಮಿತಕ್ಕೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಸ್ವಂತ ಬಳಕೆಗೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ವರ್ಗದಡಿ ಪ್ರತಿ ವಿಂಡ್ ಟರ್ಬೈನ್ ಗೆ 10 ಎಕರೆಯಂತೆ Footprint basis ಲೆಕ್ಕೀಕರಿಸಿ, ಜಮೀನುಗಳನ್ನು ಉಪಯೋಗಿಸುವುದು ಮತ್ತು ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ ಅಳವಡಿಸುವಂತೆ ಷರತ್ತುಗಳನ್ನು ವಿಧಿಸಿ, ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

M/s Avaada KNGreen Private Limited ಇವರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಸದರಿಯವರು ಕೋರಿರುವ ಸ್ಥಳವು, ಈ ಹಿಂದೆ M/s Welspun Renewable Energy Limited ಕಂಪನಿಗೆ 100 ಮೆ.ವ್ಯಾ. ಸಾಮರ್ಥ್ಯವು ಹಂಚಿಕೆಯಾಗಿ ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 196 ಎನ್‌ಸಿಇ 2019, ದಿನಾಂಕ:27.11.2019ರಂದು ರದ್ದಾಗಿರುತ್ತದೆ ಮತ್ತು M/s Welspun Renewable Energy Limited ಕಂಪನಿಯವರು ತತ್ಕಶ: ಅನುಮತಿ ಪಡೆದಿರುವ 75 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯು ನಿಗದಿತ ಅವಧಿಯಲ್ಲಿ ಡಿ.ಪಿ.ಆರ್. ಸಲ್ಲಿಸದ ಕಾರಣ ತಂತಾನೇ ರದ್ದಾಗಿರುತ್ತದೆ. ಆದ್ದರಿಂದ, M/s Avaada KNGreen Private Limited ಇವರು ಹಂಚಿಕೆಗಾಗಿ ಕೋರಿರುವ ಸ್ಥಳವು ಲಭ್ಯವಿರುತ್ತದೆ.

M/s Avaada KNGreen Private Limited ಇವರು ಯೋಜನೆಗೆ ಸಂಬಂಧಿಸಿದಂತೆ 30 ವಿಂಡ್ ಟರ್ಬೈನ್‌ಗಳನ್ನು (3300 ಕಿ.ವ್ಯಾ. ಸಾಮರ್ಥ್ಯ) ಅಳವಡಿಸುತ್ತಿದ್ದು, ಪ್ರತಿ ಟರ್ಬೈನ್‌ಗೆ 10 ಎಕರೆಯಂತೆ ಲೆಕ್ಕೀಕರಿಸಿ ಒಟ್ಟು 300 ಎಕರೆ (30 Nos of WTG x 10 Acres = 300 Acres) ಜಮೀನನ್ನು ಮಾತ್ರ ಟೋಪೋಶೀಟ್ ಸಂಖ್ಯೆ:47 P/14 ರಲ್ಲಿ ಉಪಯೋಗಿಸಿಕೊಳ್ಳಬಹುದಾಗಿದೆ.

...2

M/s Avaada KNGreen Private Limited ಕಂಪನಿಯು ದಿನಾಂಕ:15.07.2022 ರಂದು ನೊಂದಾವಣೆಗೊಂಡಿದ್ದು, ಇದರ ನೊಂದಾಯಿತ ಕಚೇರಿಯು ಉತ್ತರ ಪ್ರದೇಶದಲ್ಲಿ ಸ್ಥಾಪಿತಗೊಂಡಿದೆ. ಸದರಿ ಕಂಪನಿಯು M/s Avaada Energy Private Limited ಕಂಪನಿಯ ಅಂಗ ಸಂಸ್ಥೆಯಾಗಿದ್ದು, ಸದರಿಯವರ ನೆಟ್‌ವರ್ತ್ ದಿನಾಂಕ:31.03.2022ರ ಅಂತ್ಯಕ್ಕೆ ರೂ.2597 ಕೋಟಿಗಳಾಗಿರುತ್ತದೆ ಎಂದು ಕೆ.ಆರ್.ಇ.ಡಿ.ಎಲ್.ನಿಯಮಿತವು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ. (2)ರ ಹಂಚಿಕೆ ಸಮಿತಿ ಸಭೆಯಲ್ಲಿ M/s Avaada KNGreen Private Limited ಇವರು ವಿಜಯಪುರ ಜಿಲ್ಲೆಯ, ಬಸವನಬಾಗೇವಾಡಿ ಮತ್ತು ಕೊಲ್ಹಾರ ತಾಲ್ಲೂಕುಗಳ, ಮುಳವಾಡ, ಕಲಕುರಕೆ, ಮಲ್ಲಾಗನ್‌ಕೆರೆ, ಮಸುತಿ ತಲೆವಾಡ, ಮುತಾಗಿ, ಟಕ್ಕಲಕ್ಕಿ, ನಾಗವಾಡ, ಮನುರ ಮತ್ತು ಉಪ್ಪಲದಿನ್ನಿ ಗ್ರಾಮಗಳಲ್ಲಿ State Grid ವರ್ಗದಡಿಯಲ್ಲಿ ಹಂಚಿಕೆಗಾಗಿ ಕೋರಿರುವ 100 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳವು ಖಾಸಗಿ ಜಮೀನಾಗಿರುತ್ತದೆ. ಸದರಿಯವರು 3.3ಮೆ.ವ್ಯಾ ಸಾಮರ್ಥ್ಯದ 30 ವಿಂಡ್ ಟರ್ಬೈನ್‌ಗಳನ್ನು ಅಳವಡಿಸುತ್ತಿದ್ದು, ಅಳವಡಿಸುವ Wind Turbine ಗಳ ಅಕ್ಷಾಂಶ ಮತ್ತು ರೇಖಾಂಶಗಳನ್ನು ನೀಡಿರುತ್ತಾರೆ. ಆದುದರಿಂದ ಸದರಿ ಅಭಿವೃದ್ಧಿದಾರರು ಅಳವಡಿಸುವ ಪ್ರತಿ ಟರ್ಬೈನ್ ನ footprint ಜಾಗಕ್ಕೆ 10 ಎಕರೆಗಳಂತೆ ಒಟ್ಟು 300 ಎಕರೆ (10 x 30 =300) ಜಮೀನನ್ನು ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು ಟೋಪೋಶೀಟ್ ಸಂಖ್ಯೆ:47P/14 ರಲ್ಲಿ ಉಪಯೋಗಿಸಿಕೊಳ್ಳಬಹುದಾಗಿದೆ ಹಾಗೂ ಸದರಿಯವರು ಅಳವಡಿಸುವ ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ (Micrositing Guidelines) ಅಳವಡಿಸಬೇಕಾಗಿರುತ್ತದೆ. ಆದ ಕಾರಣ ಯೋಜನೆಗೆ ಬೇಕಾಗುವ ಜಮೀನು ಪಡೆಯುವುದು ಮತ್ತು ಕೆಪಿಟಿಸಿಎಲ್‌ನಿಂದ Evacuation ನಿರಾಕ್ಷೇಪಣಾ ಪತ್ರ ಪಡೆಯುವುದು ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ. ಸದರಿಯವರು 100 ಮೆ.ವ್ಯಾ ಸಾಮರ್ಥ್ಯದಿಂದ ಉತ್ಪಾದಿಸುವ ವಿದ್ಯುತ್ತನ್ನು State Grid ವರ್ಗದಡಿಯಲ್ಲಿ 220/110/11 kV KPTCL Basavanabagewadi substation ಗೆ evacuate ಮಾಡುವುದಾಗಿ ತಿಳಿಸಿರುತ್ತಾರೆ.

ಮುಖ್ಯ ಇಂಜಿನಿಯರ್ (ಯೋಜನೆ ಮತ್ತು ಸಮನ್ವಯ), ಕೆಪಿಟಿಸಿಎಲ್ ಇವರು ಸದರಿ ಯೋಜನೆಗೆ KPTCL 220/110/11 Basavanabagewadi substation ಇಂದ evacuation ಮಾಡಬಹುದಾಗಿದೆ ಎಂದು ತಿಳಿಸಿದರು. ಈ ಕೆಳಕಂಡ ಷರತ್ತುಗಳಿಗೊಳಪಟ್ಟು, M/s Avaada KNGreen Private Limited ಇವರಿಗೆ ವಿಜಯಪುರ ಜಿಲ್ಲೆಯ, ಬಸವನಬಾಗೇವಾಡಿ ಮತ್ತು ಕೊಲ್ಹಾರ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 100 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ನೀಡಲು ಸಮಿತಿಯು ಸರ್ವಾನುಮತಿಯಿಂದ ಶಿಫಾರಸ್ಸು ಮಾಡಿರುತ್ತದೆ.

i. ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ ನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಸ್ವಂತ ಬಳಕೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವುದಾಗಿ ಮಾಡಲು.

ii. ~~ಸದರಿ ಯೋಜನೆಗೆ KPTCL ನಿಂದ evacuation ಅನುಮತಿ ಪಡೆದು ಅನುಷ್ಠಾನಗೊಳಿಸುವುದು~~ ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ.

iii. ಈಗಾಗಲೇ ಇತರೆ ಅಭಿವೃದ್ಧಿದಾರರುಗಳು ಹಂಚಿಕೆ ಅನುಮೋದನೆ ಯನ್ನು ಪಡೆದಿರುವ ಪ್ರದೇಶದಲ್ಲಿ ಪ್ರಸ್ತಾಪಿತ ಯೋಜನೆಯ WTG Co-ordinates Overlap ಆಗಿದ್ದಲ್ಲಿ, ಅಂತಹ WTGs ಸಾಮರ್ಥ್ಯವು ರದ್ದುಗೊಳ್ಳುತ್ತದೆ.

iv. ಅಭಿವೃದ್ಧಿದಾರರು ಸದರಿ ಯೋಜನೆಯನ್ನು RE Policy 2022-27 ಹಾಗೂ ಸದರಿ ನೀತಿಗೆ ನೀಡಿದ ತಿದ್ದುಪಡಿ - 1 ರ ಪ್ರಕಾರ ಹಂಚಿಕೆ ಆದೇಶ ನೀಡಿದ ದಿನಾಂಕದಿಂದ 3 ವರ್ಷಗಳ ಅವಧಿಯಲ್ಲಿ ಅನುಷ್ಠಾನಗೊಳಿಸಬೇಕಾಗುತ್ತದೆ.

v. ಹಂಚಿಕೆ ಆದೇಶ ನೀಡಿದ ದಿನಾಂಕದಿಂದ 45 ದಿನಗಳೊಳಗೆ ಪ್ರತೀ ಮೆ.ವ್ಯಾ ಗೆ ರೂ.5 ಲಕ್ಷದಂತೆ ನೆರವೇರಿಕೆ ಬ್ಯಾಂಕ್ ಖಾತರಿಯನ್ನು ಕ್ರೆಡೆಲ್ ಗೆ ಸಲ್ಲಿಸಿತಕ್ಕದ್ದು.